ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕಾಡುಪ್ರಾಣಿಗಳ ದಾಳಿಯಿಂದ ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಹಾಗೂ ಜಾನುವಾರು ಕಳೆದುಕೊಂಡ ಕುಟುಂಬಕ್ಕೆ ಪರಿಹಾರ ಮೊತ್ತ ಹೆಚ್ಚಿಸುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

68 (571) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಕಾಡುಪ್ರಾಣಿಗಳ ದಾಳಿಯಿಂದ ವ್ಯಕ್ತಿ ಮೃತಪಟ್ಟಾಗ ಆ ಕುಟುಂಬಕ್ಕೆ ಹಾಗೂ ಕಾಡುಪ್ರಾಣಿಗಳ ದಾಳಿಯಿಂದಾಗಿ ಜಾನುವಾರು ಕಳೆದುಕೊಂಡ ಕುಟುಂಬಗಳಿಗೆ ನೀಡುತ್ತಿರುವ ಪರಿಹಾರ ಮೊತ್ತವೆಷ್ಟು ; (ಅನುಸರಿಸುತ್ತಿರುವ ನಿಯಮಗಳು/ಮಾನದಂಡಗಳು ಹಾಗೂ ಇಡೀ ಪ್ರಕ್ರಿಯೆಯ ಸಂಪೂರ್ಣ ವಿವರ ನೀಡುವುದು)

(ಆ) ವ್ಯಕ್ತಿ ಹಾಗೂ ಜಾನುವಾರುಗಳನ್ನು ಕಳೆದುಕೊಂಡ ಸಂದರ್ಭದಲ್ಲಿ ಈಗ ನೀಡುತ್ತಿರುವ ಮೊತ್ತ ಅತ್ಯಂತ ಕಡಿಮೆ ಇದ್ದು, ಅದನ್ನು ಗಣನೀಯವಾಗಿ ಹೆಚ್ಚಿಸಬೇಕಾಗಿದ್ದು, ಈ ಕುರಿತು ಸರ್ಕಾರ ತುರ್ತಾಗಿ ಕ್ರಮವಹಿಸುವುದೇ ;

(ಇ) ಯಾವ ಕಾಲಮಿತಿಯೊಳಗೆ ಪರಿಹಾರ ಮೊತ್ತವನ್ನು ಹೆಚ್ಚಿಸಲಾಗುವುದು ?